ಕರ್ನಾಟಕ ಸರ್ಕಾರ

ಸಂಖ್ಯೆ:ಗ್ರಾಅಪ:213:ಆರ್‌ಆರ್‌ಸಿ:13

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,ಸಚಿವಾಲಯ-2,
ಬೆಂಬೆಂಗಳೂರು,ದಿನಾಂಕ. 19-11-2013

## -: ಸುತ್ತೋಲೆ :-

ವಿಷಯ:- ಸಾರ್ವಜನಿಕ ಮಹತ್ವವುಳ್ಳ ಕಟ್ಟಡಗಳನ್ನು ನಿರ್ಮಿಸುವಾಗ ಜನಪ್ರತಿನಿಧಿಗಳ ಹಾಗೂ ಸಾರ್ವಜನಿಕರ ಸಲಹೆ ಪಡೆಯುವ ಕುರಿತು.

ಉಲ್ಲೇಖ:- 2007-08 ನೇ ಅವಧಿಯ 2011-13 ರ ವಿಧಾನ ಮಂಡಲದ PRI ಸಮಿತಿ ಶಿಫಾರಸ್ಸುಗಳು.

****

ಕರ್ನಾಟಕ ವಿಧಾನಸಭೆಯ ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿ 2007-08ರ ಅವಧಿಯ ಭಾರತದ ಲೆಕ್ಕ ನಿಯಂತ್ರಕರು ಹಾಗೂ ಮಹಾ ಲೆಕ್ಕ ಪರಿಶೋಧಕರ ವರದಿಯಲ್ಲಿನ ಕಂಡಿಕೆಗಳು ಹಾಗೂ ಕಾರ್ಯನಿರ್ವಹಣಾ ಸಮೀಕ್ಷೆಯ ಮೇಲೆ ಸಲ್ಲಿಸಿರುವ ವರದಿಯಲ್ಲಿ ಕೆಳಕಂಡಂತೆ ಶಿಫಾರಸ್ಸು ಮಾಡಿದೆ :

" ಇಲಾಖೆಯ ಅಧಿಕಾರಿಗಳು ಸಾರ್ವಜನಿಕ ಮಹತ್ವವುಳ್ಳ ಕಾಮಗಾರಿ ನಿರ್ಮಾಣ ಮಾಡುವ ಸಂದರ್ಭಗಳಲ್ಲಿ ಆ ಭಾಗದ ಜನರು ಹಾಗೂ ಜನಪ್ರತಿನಿಧಿಗಳ ಸಲಹೆ ಪಡೆದು, ಅವರುಗಳ ಒಪ್ಪಿಗೆ ಪಡೆದ ನಂತರ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲು ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಬೇಕು".

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸಾರ್ವಜನಿಕ ಬಳಕೆಗೆ ಮತ್ತು ಉಪಯೋಗಕ್ಕೆ ಅನುಕೂಲವಾಗುವಂತೆ ಸಾರ್ವಜನಿಕ ಮಹತ್ವವುಳ್ಳ ಕಾಮಗಾರಿಗಳನ್ನು ಅನುಷ್ಠಾನಗೊಳಿಸುವಾಗ ಇಲಾಖಾ ಅಧಿಕಾರಿಗಳು ಅಲ್ಲಿನ ಜನಪ್ರತಿನಿಧಿಗಳ ಹಾಗೂ ಸಾರ್ವಜನಿಕರ ಅಭಿಪ್ರಾಯ ಮತ್ತು ಸಲಹೆಗಳನ್ನು ಪಡೆದು, ಸಮಯೋಚಿತವಾಗಿ ನಿರ್ಧಾರ ಕೈಗೊಂಡು ಉತ್ತಮ ಗುಣಮಟ್ಟದಲ್ಲಿ ಕಾಮಗಾರಿಗಳ ಅನುಷ್ಠಾನ ಮತ್ತು ನಿರ್ಮಾಣ ಕಾಮಗಾರಿಗಳನ್ನು ಮಾಡತಕ್ಕದ್ದೆಂದು ತಿಳಿಸಿದೆ. ಇದರಿಂದ, ಸ್ಥಳೀಯವಾಗಿ ಅಗತ್ಯವಿರುವ ನಿವೇಶನ, ವಿನ್ಯಾಸ, ಗರಿಷ್ಠ ಮಿತವ್ಯಯವನ್ನು ವಿನೂತನ ಮಾದರಿಗಳೊಂದಿಗೆ ಅಳವಡಿಸಿಕೊಳ್ಳಲು

ಅವಕಾಶವಾಗಲಿದೆ. ಈ ರೀತಿ ಮಾಡುವಾಗ ಸಕ್ಷಮ ಪ್ರಾಧಿಕಾರದಿಂದ ಆಡಳಿತಾತ್ಮಕ ಮತ್ತು ತಾಂತ್ರಿಕ ಅನುಮೋದನೆಗಳನ್ನು ಪಡೆದುಕೊಳ್ಳಬೇಕು ಹಾಗೂ ಅನುದಾನ ಲಭ್ಯತೆ ಖಾತ್ರಿಪಡಿಸಿಕೊಳ್ಳಬೇಕು. ಜೊತೆಗೆ ಕಾಲಮಿತಿಯೊಳಗೆ ಕೈಗೊಂಡ ನಿರ್ಮಾಣ ಕಾಮಗಾರಿಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಿ ಸೂಕ್ತ ನಿರ್ವಹಣಾ ವ್ಯವಸ್ಥೆಯೊಂದಿಗೆ ಸಾರ್ವಜನಿಕ ಬಳಕೆಗೆ ಸಮರ್ಪಣೆಯಾಗುವಂತೆ ನೋಡಿಕೊಳ್ಳಬೇಕೆಂದು ಸೂಚಿಸಿದೆ.

(ಬೂದನಹಳ್ಳಿ ನಾಗರಾಜ್)
ನಿರ್ದೇಶಕರು, ಸುವರ್ಣ ಗ್ರಾಮೋದಯ
ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ರವರಿಗೆ:-

1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ ಅಧ್ಯಕ್ಷರುಗಳು.
2. ರಾಜ್ಯದ ಎಲ್ಲಾ (176) ತಾಲ್ಲೂಕು ಪಂಚಾಯತ್‌ಗಳ ಕಾರ್ಯನಿರ್ವಾಹಕ ಅಧಿಕಾರಿಗಳು/ ಅಧ್ಯಕ್ಷರುಗಳು.
3. ಮುಖ್ಯ ಇಂಜಿನಿಯರ್, ಪಂಚಾಯತ್‌ರಾಜ್ ಇಂಜಿನಿಯರಿಂಗ್ ಇಲಾಖೆ, ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ ಕಟ್ಟಡ, ರಿಸಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಕೆಆರ್‌ಐಡಿಎಲ್, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ವೃತ್ತ, ಬೆಂಗಳೂರು.
5. ಅಧೀಕ್ಷಕ ಇಂಜಿನಿಯರ್ (8) ಎಲ್ಲಾ ಪಂರಾಜ್ ಇಂಜಿನಿಯರಿಂಗ್ ವೃತ್ತ ಕಛೇರಿಗಳು, **ಬೆಂಗಳೂರು, ದಾವಣಗೆರೆ, ಮೈಸೂರು, ಮಂಗಳೂರು, ಬೆಳಗಾಂ, ಧಾರವಾಡ, ಗುಲ್ಬರ್ಗ & ಬಳ್ಳಾರಿ.**
6. ಕಾರ್ಯಪಾಲಕ ಇಂಜಿನಿಯರ್, ಎಲ್ಲಾ(38) ಪಂಚಾಯತ್‌ರಾಜ್ ಇಂಜಿನಿಯರಿಂಗ್ ವಿಭಾಗಗಳು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆರವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
8. ವಿಶೇಷಾಧಿಕಾರಿಗಳು(ಜಿಲ್ಲಾ ಪಂಚಾಯತ್) ಹಾಗು ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು
9. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ(6)(ಜಿ.ಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು
10. ಉಪ ನಿರ್ದೇಶಕರು,TNMC ,No.49,Khanija Bhavan, Race Course Road, Bangalore.
11. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು(ಪಂ.ರಾಜ್) ಇವರ ಆಪ್ತ ಕಾರ್ಯದರ್ಶಿಗಳು/ ನಿರ್ದೇಶಕರು (ಗ್ರಾಮೂಸೌ)/ನಿರ್ದೇಶಕರು(ಪಂ.ರಾಜ್)
12. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರು.
13. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ(10 ಪ್ರತಿಗಳು).
14. ಮುಖ್ಯ ಸಂಪಾದಕರು ಮತ್ತು ಸಂಪರ್ಕ ಅಧಿಕಾರಿ, " ಕರ್ನಾಟಕ ವಿಕಾಸ "